**ಕರ್ನಾಟಕ ಸರ್ಕಾರ**

ಸಂಖ್ಯೆ: ಡಿಟಿಇ/01/ಇಎಸ್‌ಟಿ(9)/2018 / 3308

ನಿರ್ದೇಶಕರವರ ಕಛೇರಿ
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560 001
ದಿನಾಂಕ: 16-03-2019

**-: ಹಿಂಬರಹ :-**

ಕರ್ನಾಟಕ ಸರ್ಕಾರದ ನಡವಳಿಗಳು, ಆದೇಶ ಸಂಖ್ಯೆ:ಆಇ 19 ಮಕುಮು 2018, ಬೆಂಗಳೂರು ದಿನಾಂಕ:11.01.2019ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ / ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳು, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಪೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಮತ್ತು ಶಿಕ್ಷಣ ಶಾಲೆ, ಕೆ. ಜಿ. ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ (ಇಲಾಖಾ ವೆಬ್‌ಸೈಟ್ ಮುಖಾಂತರ)
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ, (1), (2), ಮತ್ತು (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್(ಆಡಳಿತ), ಮಾಹಿತಿಗಾಗಿ.
3. ನಿರ್ದೇಶಕರ ಆಪ್ತ ಶಾಖೆಗೆ.
4. ನಿರ್ದೇಶನಾಲಯದ ನಗದು ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
5. ನಿರ್ದೇಶನಾಲಯದ ಎಂಎಸ್‌ಸಿ ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
6. ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

16/3/19

**ಆಡಳಿತಾಧಿಕಾರಿ**

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸರ್ಕಾರಿ ನೌಕರರಿಗೆ ಮಂಜೂರು ಮಾಡುತ್ತಿರುವ ಹಬ್ಬದ ಮುಂಗಡದ ಮೊತ್ತವನ್ನು ಪರಿಷ್ಕರಿಸುವ ಬಗ್ಗೆ.

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ:ಆಇ 6 ಮಕಮು 2012 ದಿ:18.06.2012

2) ಸರ್ಕಾರದ ಆದೇಶ ಸಂಖ್ಯೆ:ಆಇ 6 ಎಸ್.ಆರ್.ಪಿ 2018 ದಿ:1.03.2018.

**ಪ್ರಸ್ತಾವನೆ**

ಮೇಲೆ ಕ್ರಮ ಸಂ(1)ರಲ್ಲಿ ಓದಲಾದ ದಿನಾಂಕ:18.06.2012ರ ಸರ್ಕಾರಿ ಆದೇಶದಲ್ಲಿ ಅಧಿಕಾರಿಗಳ ವೇತನ ಸಮಿತಿಯು ಶಿಫಾರಸ್ಸು ಮಾಡಿರುವಂತೆ ರಾಜ್ಯ ಸರ್ಕಾರಿ ನೌಕರರುಗಳಿಗೆ ಮಂಜೂರು ಮಾಡಬಹುದಾದ ವಿವಿಧ ಮುಂಗಡಗಳ ಮೊತ್ತವನ್ನು ನಿಗಧಿಪಡಿಸಲಾಗಿತ್ತು. ಅದರಲ್ಲಿ ರಾಜ್ಯ ಉದ್ಯೋಗಿ ವೃಂದದಲ್ಲಿ ಖಾಯಂ ಆಗಿ ಸೇರ್ಪಡೆಯಾಗಿರುವ ಅಖಿಲ ಭಾರತ ಸೇವಾ ಅಧಿಕಾರಿಗಳು ಒಳಗೊಂಡಂತೆ ಒಬ್ಬ ಖಾಯಂ ಸರ್ಕಾರಿ ನೌಕರನಿಗೆ ಒಂದು ಆರ್ಥಿಕ ವರ್ಷದಲ್ಲಿ ಒಂದು ಬಾರಿಗೆ ರೂ. 5.000/–ಗಳ ಬಡ್ಡಿ ರಹಿತ ಹಬ್ಬದ ಮುಂಗಡವನ್ನು ಮಂಜೂರು ಮಾಡಲಾಗಿತ್ತು.

6ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸಿನನ್ವಯ ವೇತನ ಮತ್ತು ಭತ್ಯೆಗಳ ಶಿಫಾರಸ್ಸನ್ನು ಒಪ್ಪಿ ಮೇಲೆ ಕ್ರಸಂ.(2)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ರಾಜ್ಯ ಸರ್ಕಾರಿ ನೌಕರರುಗಳಿಗೆ ದಿ:1.04.2018 ರಿಂದ ಜಾರಿಗೆ ಬರುವಂತೆ ವೇತನವನ್ನು ಪರಿಷ್ಕರಿಸಿ ಆದೇಶಿಸಿದೆ. 6ನೇ ರಾಜ್ಯ ವೇತನ ಆಯೋಗದ 1ನೇ ಸಂಪುಟದ ವರದಿಯಲ್ಲಿ ರಾಜ್ಯ ಸರ್ಕಾರಿ ನೌಕರರುಗಳಿಗೆ ಮಂಜೂರು ಮಾಡುತ್ತಿರುವ ಹಬ್ಬದ ಮುಂಗಡವನ್ನು ಪರಿಷ್ಕರಿಸಿದ್ದು, ಚಾಲ್ತಿಯಲ್ಲಿರುವ ಇತರೆ ವಿವಿಧ ಮುಂಗಡಗಳನ್ನು ಬದಲಾವಣೆ ಇಲ್ಲದಂತೆ ಮುಂದುವರೆಸುವಂತೆ ಶಿಫಾರಸ್ಸು ಮಾಡಿದೆ. ಅದರಂತೆ ಸರ್ಕಾರವು ಈ ಮುಂದಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಇ 19 ಮಕಮು 2018 ಬೆಂಗಳೂರು, ದಿನಾಂಕ:11.01.2019.**

ಪ್ರಸ್ತಾವನೆಯಲ್ಲಿ ತಿಳಿಸಿರುವ ಅಂಶಗಳ- ಹಿನ್ನಲೆಯಲ್ಲಿ, ಸರ್ಕಾರಿ ಆದೇಶ ಸಂ:ಆಇ 6 ಮಕಮು 2012 ದಿನಾಂಕ:18.06.2012ರಲ್ಲಿ ಚಾಲ್ತಿಯಲ್ಲಿರುವ ಇತರೇ ಭತ್ಯೆಗಳನ್ನು ಬದಲಾವಣೆ ಇಲ್ಲದಂತೆ ಮುಂದುವರೆಸಿ, ರಾಜ್ಯ ಸಿವಿಲ್ ಸೇವಾ ವೃಂದದಲ್ಲಿ ಖಾಯಂ ಆಗಿ ಸೇರ್ಪಡೆಯಾಗಿರುವ ಅಖಿಲ ಭಾರತ ಸೇವೆಯ ಅಧಿಕಾರಿಗಳು ಸೇರಿದಂತೆ ಒಬ್ಬ ಖಾಯಂ ಸರ್ಕಾರಿ ನೌಕರನಿಗೆ ಒಂದು ಆರ್ಥಿಕ ವರ್ಷದಲ್ಲಿ ಒಂದು ಬಾರಿಗೆ ಮಾತ್ರ ಪ್ರಸ್ತುತ ಮಂಜೂರು ಮಾಡಲಾಗುತ್ತಿರುವ ಬಡ್ಡಿ ರಹಿತ ಹಬ್ಬದ ಮುಂಗಡವನ್ನು ರೂ5.000/–ಗಳಿಂದ ರೂ.10.000/–ಗಳಿಗೆ ಹೆಚ್ಚಿಸಿ ಆದೇಶಿಸಿದೆ.

ದಿನಾಂಕ:21.10.1994ರ ಸರ್ಕಾರಿ ಆದೇಶ ಸಂ:ಆಇ 48 ಮಕಮು 1994ರಲ್ಲಿ ಮುಂಗಡಗಳನ್ನು ಮಂಜೂರು ಮಾಡಲು ಅನುಸರಿಸಲಾಗುತ್ತಿರುವ ಷರತ್ತು ಮತ್ತು ನಿಬಂಧನೆಗಳು ಮುಂದುವರೆದು ಅನ್ವಯಿಸುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜೆ.ಶಶಿಧರ್) 11/1
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಆಡಳಿತ ಮತ್ತು ಮುಂಗಡಗಳು)

16604

EST(9)
JD (Adl)/ADD
18/1

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸಲು.

1840
18/1/19

ಪ್ರತಿ:

1. ಪ್ರಧಾನ ಮಹಾಲೇಖಪಾಲರು(ಲೆಕ್ಕಪತ್ರ ಮತ್ತು ತನಿಖೆ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ/ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಎಲ್ಲಾ ಕಾರ್ಯದರ್ಶಿಗಳು.
3. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6. ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು.
9. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
10. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ವಿಧಾನ ಪರಿಷತ್, ವಿಧಾನಸೌಧ, ಬೆಂಗಳೂರು.
11. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
12. ಸರ್ಕಾರದ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ- ಸಚಿವ ಸಂಪುಟ ಸಭೆ. ದಿನಾಂಕ:3.12.2018ರ ಸಭೆಯ ಕಾರ್ಯಸೂಚಿ ಕ್ರ.ಸಂ:13 (ಸಿ:703/2018)ರಲ್ಲಿನ ನಿರ್ಣಯದಂತೆ.
13. ಸರ್ಕರದ ಅಧೀನ ಕಾರ್ಯದರ್ಶಿಗಳು (ಎಫ್.ಆರ್ & ಬಿ.ಸಿ.ಸಿ), ಆರ್ಥಿಕ ಇಲಾಖೆ-ಕರ್ನಾಟಕ ಆರ್ಥಿಕ ಸಂಹಿತೆಗೆ ಸೂಕ್ತ ತಿದ್ದುಪಡಿ ಹೊರಡಿಸಲು ಕ್ರಮಕ್ಕೈಗೊಳ್ಳಲು.
14. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ಸೇವೆಗಳು-2), ವಿಧಾನಸೌಧ, ಬೆಂಗಳೂರು.
15. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
16. ಆರ್ಥಿಕ ಇಲಾಖೆಯ ಗಣಕ ಕೋಶ-ಆರ್ಥಿಕ ಇಲಾಖೆಯ ವೆಬ್-ಸೈಟ್ ನಲ್ಲಿ ಅಪ್-ಲೋಡ್ ಮಾಡಲು.
17. ಕಛೇರಿ ಪ್ರತಿ / ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿಗಳು.